ಕರ್ನಾಟಕ ಸರ್ಕಾರ

**ಪರೀಕ್ಷಾ ತುರ್ತು**

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ,ಬೆಂಗಳೂರು-560003**

ಸಂಖ್ಯೆ:ಎ8/ಪ್ರ.ಪ.ಸು/ಮಾರ್ಚ್-22/48/2021-22 ದಿನಾಂಕ:15.03.2022

## :: ಸುತ್ತೋಲೆ ::

ವಿಷಯ: 2022ನೇ ಮಾರ್ಚ್/ಏಪ್ರಿಲ್ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರಗಳ ವಿತರಣೆ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ ಇಪಿ 197 ಎಸ್‌ಎಲ್‌ಬಿ 2021 ದಿನಾಂಕ:06.12.2021.
2. ಮಂಡಳಿ ಅಧಿಸೂಚನೆ ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ.ಅಧಿಸೂಚನೆ/ಮಾರ್ಚ್-2022/ 39/2021-22 ದಿನಾಂಕ:07.12.2021.

* * * * * * *

2022ನೇ ಮಾರ್ಚ್/ಏಪ್ರಿಲ್ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರಗಳನ್ನು ದಿನಾಂಕ:16.03.2022ರಂದು ವಿಭಾಗವಾರು ಮಂಡಳಿಯ ಜಾಲತಾಣದ ಶಾಲಾಲಾಗಿನ್‌ನಲ್ಲಿ ಅಪ್‌ಲೋಡ್ ಮಾಡಲಾಗುವುದು. ಶಾಲಾ ಮುಖ್ಯೋಪಾಧ್ಯಾಯರು ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದ ಶಾಲಾ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ವಿತರಿಸುವುದು.

ಸದರಿ ಪರೀಕ್ಷೆಗೆ ತಾತ್ಕಾಲಿಕ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಅಪ್‌ಲೋಡ್‌ಮಾಡಿ, ತಿದ್ದುಪಡಿಗಳಿದ್ದಲ್ಲಿ ಆನ್‌ಲೈನ್ ಮುಖಾಂತರವೇ ಮುಖ್ಯಶಿಕ್ಷಕರ ಹಂತದಲ್ಲಿಯೇ ತಿದ್ದುಪಡಿಮಾಡಿಕೊಳ್ಳಲು ದಿನಾಂಕ:16.02.2022 ರಿಂದ 06.03.2022ರವರೆಗೆ ಈಗಾಗಲೇ ಅವಕಾಶ ಕಲ್ಪಿಸಲಾಗಿತ್ತು. ಆದಾಗ್ಯೂ ವಿದ್ಯಾರ್ಥಿಗಳ ಪ್ರವೇಶ ಪತ್ರಗಳಲ್ಲಿ ಏನಾದರೂ ತಿದ್ದುಪಡಿಗಳು ಕಂಡುಬಂದಲ್ಲಿ ಕೆಳಕಂಡ ಅಂಶಗಳನ್ವಯ ಪರಿಶೀಲಿಸಿ ಕ್ರಮವಹಿಸಲು ತಿಳಿಸಿದೆ.

1. ತಮ್ಮ ಶಾಲೆಯ ಮುಖಾಂತರ ನೋಂದಾಯಿಸಿದ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ, ಡೌನ್‌ಲೋಡ್ ಮಾಡಿಕೊಂಡ **ಪ್ರವೇಶ ಪತ್ರಗಳ ಸಂಖ್ಯೆಗೆ ಸರಿ ಹೊಂದುತ್ತಿವೆಯೇ ಎಂದು** ಪರಿಶೀಲಿಸಿಕೊಳ್ಳುವುದು. ಒಂದು ವೇಳೆ ಯಾವುದಾದರು ವಿದ್ಯಾರ್ಥಿಯ ಪ್ರವೇಶ ಪತ್ರ ಬಂದಿಲ್ಲದಿದ್ದರೆ, ಸದರಿ ವಿದ್ಯಾರ್ಥಿಯ ವಿವರವನ್ನು ಸಮರ್ಥನೆಯೊಂದಿಗೆ / ದಾಖಲೆಗಳೊಂದಿಗೆ ಮಂಡಳಿಗೆ ಕೂಡಲೇ ಕಳುಹಿಸಿಕೊಡುವುದು.
2. ಒಂದು ವೇಳೆ CCERF ವಿದ್ಯಾರ್ಥಿ CCEPF ಆಗಿದ್ದು, ಅಥವಾ CCEPF ವಿದ್ಯಾರ್ಥಿ CCERF ಆಗಿದ್ದು, ಹೀಗೆ ವಿದ್ಯಾರ್ಥಿಯ ವಿಧ ಬದಲಾಗಿದ್ದಲ್ಲಿ ಅಂತಹ **ಪ್ರವೇಶ ಪತ್ರಗಳನ್ನು ಸೂಕ್ತ ದಾಖಲೆಗಳ ಸಮರ್ಥನೆಯೊಂದಿಗೆ ತಿದ್ದುಪಡಿಗಾಗಿ ಮಂಡಳಿಗೆ ಕಳುಹಿಸಿಕೊಡುವುದು.**
3. ಉಲ್ಲೇಖಿತ-2ರ ಅಧಿಸೂಚನೆಯಲ್ಲಿ ವಿವರಿಸಿರುವಂತೆ ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳಿಗೆ ವಿಶೇಷ ಸೌಲಭ್ಯ/ವಿನಾಯಿತಿ ನೀಡುವ ಸಂಬಂಧ ಉಪನಿರ್ದೇಶಕರ ಜ್ಞಾಪನದನ್ವಯ ದೈಹಿಕ ಸ್ಥಿತಿ, ಭಾಷಾ ವಿನಾಯಿತಿ, ಬದಲಿ ವಿಷಯಗಳು ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ಬಗ್ಗೆ ಮುಖ್ಯಶಿಕ್ಷಕರು

ಖಚಿತಪಡಿಸಿಕೊಳ್ಳುವುದು. ಇಲ್ಲವಾದಲ್ಲಿ ಉಪನಿರ್ದೇಶಕರ ಜ್ಞಾಪನದ ಪ್ರತಿಯನ್ನು ದೃಢೀಕರಿಸಿ ಸಮರ್ಥನೆಯೊಂದಿಗೆ ಸಂಬಂಧಿಸಿದ ಶಾಖಾಧಿಕಾರಿಗಳಿಗೆ ಕಳುಹಿಸಿ ವಿನಾಯಿತಿ ಪಡೆದುಕೊಳ್ಳುವುದು.

4. ಶಾಲಾ ಸಂಕೇತದಲ್ಲಿ ಹಾಗೂ ಶಾಲೆಯ ಹೆಸರಿನಲ್ಲಿ ಏನಾದರೂ ವ್ಯತ್ಯಾಸ ಕಂಡು ಬಂದಲ್ಲಿ ಸೂಕ್ತ ದಾಖಲೆಗಳೊಂದಿಗೆ ಸರಿಪಡಿಸಲು ಮತ್ತು ಪರೀಕ್ಷಾ ಕೇಂದ್ರಗಳಿಗೆ ಸಂಬಂಧಿಸಿದ ಮಾಹಿತಿಗೆ **ಶ್ರೀ ಕೋದಂಡರಾಮಯ್ಯ, ಹಿರಿಯ ಸಹಾಯಕ ನಿರ್ದೇಶಕರು, 'ಸಿ' ಶಾಖೆ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ಇವರಿಗೆ ಕಳುಹಿಸಿಕೊಡುವುದು ಹಾಗೂ ದೂರವಾಣಿ ಸಂಖ್ಯೆ 080-23349088 ಸಂಪರ್ಕಿಸಬಹುದು.**

5. ಶಾಲೆಯಿಂದ ಅಪ್‌ಲೋಡ್ ಮಾಡಿರುವಂತೆ ವಿದ್ಯಾರ್ಥಿಗಳ ಭಾವಚಿತ್ರವನ್ನು ಪ್ರವೇಶ ಪತ್ರದಲ್ಲಿ ಮುದ್ರಿಸಲಾಗಿದೆ. ವಿದ್ಯಾರ್ಥಿಯ ಭಾವಚಿತ್ರ ಮತ್ತೊಂದು ವಿದ್ಯಾರ್ಥಿಯ ಭಾವಚಿತ್ರದೊಂದಿಗೆ ಅದಲು ಬದಲಾಗಿದ್ದಲ್ಲಿ ಸರಿಯಾದ ವಿದ್ಯಾರ್ಥಿಗಳ ಭಾವಚಿತ್ರಗಳನ್ನು ಮುಖ್ಯಶಿಕ್ಷಕರು ದೃಢೀಕರಿಸಿ ಪ್ರವೇಶಪತ್ರವನ್ನು ಮಂಡಳಿಗೆ ಹಿಂದಿರುಗಿಸಿ ಸರಿಪಡಿಸಿಕೊಳ್ಳುವುದು. ಪ್ರವೇಶ ಪತ್ರದಲ್ಲಿ ಹಾಗೂ ಕೇಂದ್ರ ನಾಮಯಾದಿಪಟ್ಟಿಯಲ್ಲಿ ಭಾವಚಿತ್ರ ಇಲ್ಲದೇ ಇರುವ ವಿದ್ಯಾರ್ಥಿಗೆ ಪರೀಕ್ಷೆ ಬರೆಯಲು ಅನುಮತಿ ನೀಡಲಾಗುವುದಿಲ್ಲ. ಮತ್ತು ಸರಿಯಾದ ಅಳತೆಯಲ್ಲಿ ಭಾವಚಿತ್ರ (60-80ಕೆ.ಬಿ) ಮತ್ತು ಸಹಿ (40-50ಕೆ.ಬಿ)ಗಳು ಪ್ರವೇಶಪತ್ರದಲ್ಲಿ ಮುದ್ರಣಗೊಂಡಿಲ್ಲದೇ ಇದ್ದಲ್ಲಿ ಅಂತಹ ವಿದ್ಯಾರ್ಥಿಗಳ ಪ್ರವೇಶಪತ್ರಗಳನ್ನು ದೃಢೀಕರಿಸಿದ ಭಾವಚಿತ್ರ ಮತ್ತು ಸಹಿಯೊಂದಿಗೆ ಮಂಡಳಿಗೆ ಸಲ್ಲಿಸಿ ಸರಿಪಡಿಸಿಕೊಳ್ಳುವುದು. ಒಂದು ವೇಳೆ ಸರಿಪಡಿಸಿಕೊಳ್ಳದೇ ಇದ್ದಲ್ಲಿ ಇದರಿಂದ ವಿದ್ಯಾರ್ಥಿಗೆ ಮುಂದೆ ಅಂಕಪಟ್ಟಿಯಲ್ಲಾಗುವ ತೊಂದರೆಗೆ ಸಂಬಂಧಿಸಿದ ಶಾಲಾ ಮುಖ್ಯಸ್ಥರೇ ಜವಾಬ್ದಾರರಾಗಿದ್ದು, ಮಂಡಳಿಯು ಇದರ ಜವಾಬ್ದಾರಿ ಹೊರುವುದಿಲ್ಲ ಎಂಬುದನ್ನು ಸ್ಪಷ್ಟಪಡಿಸಿದೆ.

6. ಯಾವುದೇ ವಿದ್ಯಾರ್ಥಿಯ ಭಾವಚಿತ್ರ ಬದಲಾವಣೆಗೆ ಸಂಬಂಧಿಸಿದಂತೆ, ಪರೀಕ್ಷೆಗೆ ಮುಂಚೆ ಮಾಡಲಾದ ಬದಲಾವಣೆಗಳನ್ನು ಮಾತ್ರ ಮಂಡಳಿಯು ಪರಿಗಣಿಸುತ್ತದೆ. ಪರೀಕ್ಷಾ ನಂತರದಲ್ಲಿ ಬರುವ ವಿದ್ಯಾರ್ಥಿಗಳ ಭಾವಚಿತ್ರ ಬದಲಾವಣೆ ಕುರಿತ ಯಾವುದೇ ಮನವಿಗಳನ್ನು ಮಂಡಳಿ ಪುರಸ್ಕರಿಸುವುದಿಲ್ಲ. ಇದಕ್ಕೆ ಸಂಬಂಧಿಸಿದ ಶಾಲಾ ಮುಖ್ಯಸ್ಥರು ಹಾಗೂ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರುಗಳು ನೇರ ಜವಾಬ್ದಾರರಾಗಿರುತ್ತಾರೆ. ಒಂದು ವೇಳೆ ಇದಕ್ಕೆ ವ್ಯತಿರಿಕ್ತವಾಗಿ ಬದಲಿ ವಿದ್ಯಾರ್ಥಿ ಪರೀಕ್ಷೆ ಬರೆಯಲು ಸಹಕರಿಸಿ ಪರೀಕ್ಷಾ ಅವ್ಯವಹಾರದಲ್ಲಿ ಭಾಗಿಯಾಗಿರುತ್ತೀರೆಂದು ಪರಿಗಣಿಸಿ ಸಂಬಂಧಿಸಿದ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರ ಮತ್ತು ಶಾಲಾ ಮುಖ್ಯಸ್ಥರ ಮೇಲೆ ಕೆ.ಸಿ.ಎಸ್ (ಸಿ.ಸಿ.ಎ.) ನಿಯಮ-1957 ಮತ್ತು 1983ರ ಕರ್ನಾಟಕ ಶಿಕ್ಷಣ ಕಾಯ್ದೆ ಹಾಗೂ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕಾಯ್ದೆ-1966 ರನ್ವಯ ಕ್ರಮ ಜರುಗಿಸಲಾಗುವುದು.

7. ಶಾಲೆಯಿಂದ ಅಪ್‌ಲೋಡ್ ಮಾಡಿರುವಂತೆ ವಿದ್ಯಾರ್ಥಿಗಳ ಹೆಸರು, ಭಾವಚಿತ್ರ, ಸಹಿ, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ, ಲಿಂಗ, ಮಾಧ್ಯಮ, ಪರೀಕ್ಷೆಗೆ ತೆಗೆದುಕೊಳ್ಳುವ ವಿಷಯಗಳು, ವಿದ್ಯಾರ್ಥಿಯ ವಿಧದ ಇತ್ಯಾದಿ ಸಂಪೂರ್ಣ ವಿವರಗಳು ಪ್ರವೇಶ ಪತ್ರದಲ್ಲಿ ಮುದ್ರಣವಾಗಿದ್ದು, ಸದರಿ ಮಾಹಿತಿಗಳಲ್ಲಿ ವಿದ್ಯಾರ್ಥಿ ಹೆಸರು, ತಂದೆ, ತಾಯಿಯ ಹೆಸರು ಪೂರ್ಣ ಬದಲಾವಣೆ ಇದ್ದಲ್ಲಿ ಹಾಗೂ ಜನ್ಮ ದಿನಾಂಕದಲ್ಲಿ ಯಾವುದೇ ಬದಲಾವಣೆ ಇದ್ದಲ್ಲಿ ಎ.ಆರ್.ಇ (ಶಾಲಾ ದಾಖಲಾತಿ ವಹಿಯ ಉಧೃತ ಭಾಗ) ಮತ್ತು ಉಪನಿರ್ದೇಶಕರು/ಕ್ಷೇತ್ರ ಶಿಕ್ಷಣಾಧಿಕಾರಿಗಳ ಜ್ಞಾಪನ ಪತ್ರವನ್ನು ಪರಿಶೀಲನಾ ಶಾಖೆಗೆ ನಿಗಧಿತ ದಿನಾಂಕದೊಳಗೆ ಕಳುಹಿಸಿಕೊಡುವುದು. ಹೀಗೆ ತಿದ್ದುಪಡಿಗೆ ಕಳುಹಿಸಿದ ಪ್ರವೇಶ ಪತ್ರಗಳನ್ನು ಮಂಡಳಿಯಲ್ಲಿನ ದಾಖಲೆಗಳೊಂದಿಗೆ ಪರಿಶೀಲಿಸಿ ಸರಿಪಡಿಸಲಾಗುವುದು.

8. **ಪ್ರವೇಶ ಪತ್ರಗಳಲ್ಲಿ ತಿದ್ದುಪಡಿಗಳಿದ್ದಲ್ಲಿ, ಡೌನ್‌ಲೋಡ್ ಮಾಡಿಕೊಂಡ ಅಂತಿಮ ಪ್ರವೇಶ ಪತ್ರದ ಜೆರಾಕ್ಸ್ ಪ್ರತಿಯಲ್ಲಿ ಕೆಂಪು ಶಾಯಿಯಲ್ಲಿಯೇ ತಿದ್ದುಪಡಿಗಳನ್ನು ನಮೂದಿಸಿ ಮುಖ್ಯ ಶಿಕ್ಷಕರು ದೃಢೀಕರಿಸಿ ಮಂಡಳಿಗೆ ಸಲ್ಲಿಸುವುದು.**

9. ಪುನರಾವರ್ತಿತ ವಿದ್ಯಾರ್ಥಿಗಳಿಗೆ ಪಾಸಾದ ವಿಷಯಕ್ಕೆ ಪರೀಕ್ಷೆ ಬರೆಯುವಂತೆ ಮುದ್ರಣವಾಗಿದ್ದಲ್ಲಿ, ಪಾಸಾದ ಬಗ್ಗೆ ಚುಕ್ಕೆ ಗುರುತಿಲ್ಲದ ಫಲಿತಾಂಶ ಪಟ್ಟಿಯನ್ನು ಮುಖ್ಯಶಿಕ್ಷಕರು ದೃಢೀಕರಿಸಿ ಪರೀಕ್ಷೆ ಪ್ರಾರಂಭವಾಗುವುದಕ್ಕೆ ಮುಂಚಿತವಾಗಿ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳಿಗೆ ಕಳುಹಿಸುವುದು.

10. ಒಂದೇ ವಿದ್ಯಾರ್ಥಿಗೆ ಎರಡು ನೋಂದಣಿ ಸಂಖ್ಯೆಯ ಪ್ರವೇಶ ಪತ್ರಗಳು ಬಂದಿದ್ದಲ್ಲಿ ಒಂದನ್ನು ಉಳಿಸಿಕೊಂಡು ಮತ್ತೊಂದನ್ನು ರದ್ದುಪಡಿಸಿ ದೃಢೀಕರಿಸಿ ಸೂಕ್ತ ಷರಾದೊಂದಿಗೆ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳ ವಿಳಾಸಕ್ಕೆ ಹಿಂದಿರುಗಿಸುವುದು.

11. CCERF & CCERR ವಿದ್ಯಾರ್ಥಿಗಳನ್ನು ಸಾಮಾನ್ಯ ಪರೀಕ್ಷಾ ಕೇಂದ್ರಗಳಲ್ಲಿ ಹಾಗೂ CCEPF, CCEPR, NSR & NSPR ಅಭ್ಯರ್ಥಿಗಳನ್ನು ಜಿಲ್ಲಾ/ತಾಲ್ಲೂಕು ಖಾಸಗಿ ಪರೀಕ್ಷಾ ಕೇಂದ್ರಗಳಿಗೆ ಹಂಚಿಕೆ ಮಾಡಲಾಗಿರುತ್ತದೆ. ಶಾಲಾ ಮುಖ್ಯ ಶಿಕ್ಷಕರು ಸಂಬಂಧಿಸಿದ ವಿದ್ಯಾರ್ಥಿಗಳಿಗೆ ಈ ಕುರಿತು ಮಾಹಿತಿಯನ್ನು ನೀಡುವುದು.

12. **ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರಗಳಲ್ಲಿ ವಿದ್ಯಾಥಿಯ ಹೆಸರು, ತಂದೆ ಹೆಸರು, ತಾಯಿ ಹೆಸರು, ಇತರೆ ತಿದ್ದುಪಡಿಗಳಿದ್ದಲ್ಲಿ ಪ್ರತಿ ತಿದ್ದುಪಡಿಗೆ ರೂ.100/- ದಂಡ ಶುಲ್ಕವನ್ನು ನೆಫ್ಟ್ ಚಲನ್ ಮೂಲಕ ಪಾವತಿಸಿ ದಿನಾಂಕ:23.03.2022 ರೊಳಗೆ ಮಂಡಳಿಗೆ ತಲುಪುವಂತೆ ಪ್ರಸ್ತಾವನೆಯನ್ನು ಸಲ್ಲಿಸುವುದು.**

**ಮಾರ್ಚ್/ಏಪ್ರಿಲ್ –2022ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಯ ಅಂತಿಮ ಪ್ರವೇಶ ಪತ್ರಗಳಲ್ಲಿ ತಿದ್ದುಪಡಿಗಳಿದಲ್ಲಿ ಪ್ರಸ್ತಾವನೆಯನ್ನು ರವಾನಿಸಬೇಕಾದ ಮಂಡಳಿಯ ಅಧಿಕಾರಿಗಳ ಹೆಸರು ಮತ್ತು ಸಂಬಂಧಿಸಿದ ಜಿಲ್ಲೆಗಳ ಮಾಹಿತಿ.**

| ಕ್ರ ಸಂ | ಶಾಖೆ | ಪರಿಶೀಲನಾ ಅಧಿಕಾರಿಗಳು<br>ಶ್ರೀಮತಿ: ಶ್ರೀ | ಜಿಲ್ಲೆ | ದೂರವಾಣಿ ಸಂಖ್ಯೆ |
|---|---|---|---|---|
| 1 | ಎಫ್ | ಸಂಧ್ಯಾ ಹೆಚ್ ಎಸ್<br>ಸಹಾಯಕ ನಿರ್ದೇಶಕರು | ಬೆಂಗಳೂರು ದಕ್ಷಿಣ / ಹಾವೇರಿ / ಶಿವಮೊಗ್ಗ | 9886846881 |
| 2 | ಜಿ | ನರೇಂದ್ರಕುಮಾರ್<br>ಸಹಾಯಕ ನಿರ್ದೇಶಕರು | ಬೆಂಗಳೂರು ಉತ್ತರ/ಚಿಕ್ಕಬಳ್ಳಾಪುರ/ ಕೋಲಾರ | 9900190492 |
| 3 | ಹೆಚ್ | ಎಂ.ಎನ್.ಶ್ರೀನಿವಾಸ್<br>ಸಹಾಯಕ ನಿರ್ದೇಶಕರು | ಚಿತ್ರದುರ್ಗ/ದಾವಣಗೆರೆ/ಬೆಂಗಳೂರು ಗ್ರಾಮಾಂತರ/ರಾಮನಗರ | 9449052591 |
| 4 | ಐ | ಗೋಪಿನಂದನ್<br>ಸಹಾಯಕ ನಿರ್ದೇಶಕರು | ಚಾಮರಾಜನಗರ/ಮಂಡ್ಯ/ ತುಮಕೂರು/ ಮಧುಗಿರಿ | 9449524725 |
| 5 | ಜೆ | ನರೇಂದ್ರಕುಮಾರ್<br>ಸಹಾಯಕ ನಿರ್ದೇಶಕರು | ಮೈಸೂರು | 9900190492 |
| | | ಸಿ ವಿ ನಟರಾಜ<br>ಹಿರಿಯ ಸಹಾಯಕ ನಿರ್ದೇಶಕರು | ಹಾಸನ | 7892937084 |
| | | ಎಂ.ಎನ್.ಶ್ರೀನಿವಾಸ್<br>ಸಹಾಯಕ ನಿರ್ದೇಶಕರು | ಚಿಕ್ಕಮಗಳೂರು | 9449052591 |
| | | ಸಂಧ್ಯಾ ಹೆಚ್ ಎಸ್<br>ಸಹಾಯಕ ನಿರ್ದೇಶಕರು | ಕೊಡಗು | 9886846881 |

| | | | | |
|---|---|---|---|---|
| 6 | ಕೆ | ಗಾಯತ್ರಿದೇವಿ<br>ಹಿರಿಯ ಸಹಾಯಕ ನಿರ್ದೇಶಕರು | ಗದಗ/ ಕೊಪ್ಪಳ/ ಬಿಜಾಪುರ/ ಬಾಗಲಕೋಟೆ | 9986090437 |
| 7 | ಎಲ್ | ಜಯರಾಮುಡು<br>ಸಹಾಯಕ ನಿರ್ದೇಶಕರು | ಧಾರವಾಡ/ ಚಿಕ್ಕೋಡಿ/ ಬೆಳಗಾವಿ | 9449674952 |
| 8 | ಎಂ | ಗಿರೀಶ್ ಕುಮಾರ್<br>ಹಿರಿಯ ಸಹಾಯಕ ನಿರ್ದೇಶಕರು | ಮಂಗಳೂರು/ ಉಡುಪಿ/ ಕಾರವಾರ/ಶಿರಸಿ/ ರಾಯಚೂರು | 9448542295 |
| 9 | ಎನ್ | ಸಿ ವಿ ನಟರಾಜ<br>ಹಿರಿಯ ಸಹಾಯಕ ನಿರ್ದೇಶಕರು | ಗುಲ್ಬರ್ಗಾ/ ಯಾದಗಿರಿ/ ಬೀದರ್/ ಬಳ್ಳಾರಿ | 7892937084 |

ಈ ಮೇಲ್ಕಂಡ ಅಂಶಗಳಂತೆ ಶಾಲೆಯ ಎಲ್ಲಾ ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಆದ್ಯತೆ ಮೇರೆಗೆ ಕಡ್ಡಾಯವಾಗಿ ಪರಿಶೀಲಿಸಿ, ತಿದ್ದುಪಡಿಗಳಿದ್ದಲ್ಲಿ ಪಟ್ಟಿ ಮಾಡಿ ನಮೂದಿಸಿ, ಸದರಿ ಪ್ರವೇಶ ಪತ್ರಗಳನ್ನು ಸರಿಪಡಿಸಲು ನಿಮ್ಮ ಜಿಲ್ಲೆಗೆ ಸಂಬಂಧಿಸಿದ ಮಂಡಳಿಯ ಪರಿಶೀಲನಾಧಿಕಾರಿಗಳಿಗೆ ದಂಡ ಶುಲ್ಕದೊಂದಿಗೆ **ದಿನಾಂಕ:23.03.2022ರ** ಒಳಗೆ ತಲುಪುವಂತೆ ಪ್ರಸ್ತಾವನೆಯನ್ನು ಕಳುಹಿಸಿ ಕೊಡತಕ್ಕದ್ದು. ನಂತರ ತಿದ್ದುಪಡಿಗಾಗಿ ಬಂದ ಯಾವುದೇ ಕೋರಿಕೆಗಳನ್ನು ಪರಿಗಣಿಸಲಾಗುವುದಿಲ್ಲ. ತಿದ್ದುಪಡಿಗೆ ಅರ್ಹವಾದ ಪ್ರವೇಶ ಪತ್ರಗಳನ್ನು ಸೂಕ್ತ ತಿದ್ದುಪಡಿ ಮಾಡಿ, ಪರಿಷ್ಕೃತ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲಾಗುವುದು.

11/3/2022

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು ಪರೀಕ್ಷೆಗಳು

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ)ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮುಂದಿನ ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯಶಿಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ
6. ಶಾಖಾಧಿಕಾರಿಗಳು, ಬಿ & ಸಿ ಶಾಖೆಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
7. ಶಾಖಾಧಿಕಾರಿಗಳು ಗಣಕ ಶಾಖೆ ಇವರು ಈ ಸುತ್ತೋಲೆಯನ್ನು ಮಂಡಳಿಯ ಅಂತರ್‌ಜಾಲ & ಶಾಲಾಲಾಗಿನ್‌ನಲ್ಲಿ ಪ್ರಕಟಿಸುವುದು ಮತ್ತು ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಇಮೇಲ್‌ಗೆ ಕಳುಹಿಸುವುದು.
8. ನಿರ್ದೇಶಕರು / ಕಾರ್ಯದರ್ಶಿಗಳ ಆಪ್ತ ಶಾಖೆಯ ಮಾಹಿತಿಗಾಗಿ.
9. ಮಂಡಳಿಯ ಎಲ್ಲಾ ಶಾಖಾಧಿಕಾರಿಗಳು ಮತ್ತು ಅಧೀಕ್ಷಕರುಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
10. ಕಛೇರಿ ಪ್ರತಿ.

**ಪ್ರತಿಯನ್ನು, ಗೌರವಪೂರ್ವಕವಾಗಿ :-**

ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಸಲ್ಲಿಸಿದೆ.